ಮೈಸೂರು ಡಿಸ್ಟ್ರಿಕ್ಟ್.

ತಾರೀಖು 25ನೇ ಜೂನ್ 1896.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

1. ಕಂದಾಯದ ಬಾಕಿದಾರನಾದ ಕಾಯಂಗುತ್ತಾ ಭಾರತೀಪುರ ಗ್ರಾಮದ ವೆಂಕಟಗಿರಿಗೌಡನಿಂದ ಬರಬೇಕಾದ ಜವಿರ್ಾ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಮೈಸೂರ್ ಡಿಸ್ಟ್ರಿಕ್ಟ್ ಕೃಷ್ಣರಾಜಪೇಟೆ ತಾಲ್ಲೂಕು ಕಚೇರಿಯಲ್ಲಿ 1896ನೇ ಇಸವಿ ಆಗಸ್ಟ್ 10ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ಆ ದಿವಸ ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1895–96ನೇ ಸಾಲಿಗೆ ಪೂರ್ತಿಯಾಗಿ* ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಯೀಲ್ ಮೇರಿಗೆ 308–3–3 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜು ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿಮಾಡಲ್ಪಡದೆ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿಮಾಡಲ್ಪಡದೆ ಹೋಗಾಗ್ಗೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟ್ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮ್ಮಿಷನರವರಿಂದ ಮುಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮ್ಮಿಷನರವರಿಂದ ಹರಾಜು ಮುಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರೆಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜ್ ಸರ್ಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ವುಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯೂಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕಿದಾರನ ಹೆಸರು.	ಸ್ವತ್ತಿನ ತಫ್ಸೀಲ್. ಕಟ್ಟಡಗಳು. ಕಟ್ಟಿಸಿದವರ ಹೆಸರು.	ಅಂದಾಜು ಬೆಲ್ಲ.	ಜಮೀನು. ನಂಬರ್ ಅಥವಾ ಹಿಸ್ಸಾನಿನ ಹೆಸರು.	ಮಿಸ್ಲೀ ತಲೇ ಅಥವಾ ಬಾಗಾಯತು.	ವಿಸ್ತೀರ್ಣ.	ಆಕಾರ.	ಸರ್ಕಾರಕ್ಕೆ ಬರಬೇಕಾದ ಸಂಪೂರ್ಣ ಸೊಲಗು ಸೇರಿಸಿದ ಮೇಲೆ ಬಾಕಿ ಸೊಲಗು.
1	2	3	4	5	6	7	8	9	10	11
ಹೈಣ್ಣಂ ರಾಜಪೇಟೆ.	ನಂಜಿನಾಪಹಳ್ಳಿ.	ಕಾಯಂಗೊಣ್ಣಾ ಭೂದೇವಿಪುರ.	ವೆಂಕಟಗಿರಿಗೌಸಾಯಿ	..	ರೂ. ಅ. ಪೈ. ..	ಸೈನ್ಯ ಖಾನಾ ಹೊರಪಡಿನ ಪೂರಾ ಗ್ರಾಮ ನನ್ನೆ.	ಖುಷ್ಕೀ ಪರಂಪೋಕು ತರೀ ಬಾಗಾಯತು	ಎಕರೆ. ಗುಂಟೆ. 486 20 289 13 77 28 12 32 866 13	ರೂ. 790	ಆ. ಪೈ. 4 0	ರೂ. ಆ. ಪೈ. 308 3 3 ಹರಾಜು ತಾರೀಖು ವರಿಗೆ ಬಡ್ಡಿ ಬರಬೇಕು.

* ಯಾ ಬಾಕಿ ಇರುವ ಮಟ್ಟಿಗೆ ಸಂದರ್ಭಾನುಸಾರ ನಮೂದಿಸತಕ್ಕದ್ದು.

ಬಿ. ಕೆ. ವೆಂಕಟವರದಯ್ಯಂಗಾರ್,
ಡೆಪ್ಯೂಟಿ ಕಮ್ಮಿಷನರ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

ಸ್ ೧೮೯೫—೯೬ನೇ ಇಸವಿ ಅರ್ಜೀ ನಂಬರ್ 451.

ಅರ್ಜೀದಾರ್ ತಿರುಮಕೂಡ್ಲು ನರಶೀಪುರದ ತಾಲ್ಲೂಕು ಸೋಸಲೆಯಲ್ಲಿರುವ ಶ್ರೀನಿವಾಸರಂಗಾಚಾರು, ಮೈನರಾದ ಸದರೀ ಸ್ಥಳದ ಕೇಷಾದ್ರಿ ನರಸುಂಹ್ಮಾಚಾರ್ರ ಆಸ್ತೀ ವಿಷಯದಲ್ಲಿ—

ಸದರೀ ಮೈನರಾದ ಕೇಷಾದ್ರಿ ನರಸುಂಹ್ಮಾಚಾರಿಗೆ ಸೋದರಮಾವ ಆಗಬೇಕೆಂಬ ಹಕ್ಕಿನಮೇಲೆ ಸದರೀ ಸೋಸಲೆ ಸ್ಥಳದ ಸದರೀ ಶ್ರೀನಿವಾಸರಂಗಾಚಾರ್ರು, ಸದರೀ ಮೈನರಿನ ಆಸ್ತೀ ಕಾಪಾಡುವದಕ್ಕೆ ಸರಟಿಫಿಕೇಟ್ ಬಗ್ಯೆ ಅರ್ಜಿ ಕೊಟ್ಟು ಇರುತ್ತಾರೆ.

ಸದರೀ ಅರ್ಜಿ ಹಿಯರಿಂಗ್ ಬಗ್ಯೆ 1896ನೇ ಇಸವಿ ಜುಲೈ ತಾರೀಖು 31ರಲ್ಲು ಮೊಕರರ್ ಮಾಡಿರುವದಾಗಿ ಇದರಿಂದ ನೋಟಿಸ್ ಕೊಡಲಾಗಿದೆ.

ಸ್ ೧೮೯೫—೯೬ನೇ ಇಸವಿ ಅರ್ಜೀ ನಂಬರ್ 452.

ಮೃತಪಟ್ಟ ವೆಂಕಟರಮಣಪ್ಪ ವುರಫ್ ಅಮ್ಮಣ್ಣಪ್ಪನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಮಲ್ಲಮ್ಮನವರು, ಮೃತಪಟ್ಟ ಸದರೀ ವೆಂಕಟರಮಣಪ್ಪ ವುರಫ್ ಅಮ್ಮಣ್ಣಪ್ಪನವರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಮಂಡೀಮೊಹಲಾ ಸ್ಥಳದ ಸದರೀ ಮಲ್ಲಮ್ಮನವರು, ಸದರೀ ವಾಸಸ್ಥರಾಗಿ ಮೃತಪಟ್ಟ ವೆಂಕಟರಮಣಪ್ಪ ವುರಫ್ ಅಮ್ಮಣ್ಣಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ 1,000 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ ೧೮೬೦ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮಲ್ಲಮ್ಮನವರ ಅರ್ಜಿಯನ್ನು ಸ್ ೧೮೯೬ನೇ ಇಸವಿ ಜುಲೈ ತಿಂಗಳ ತಾರೀಖು 31ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವೆಂಕಟರಮಣಪ್ಪ ವುರಫ್ ಅಮ್ಮಣ್ಣಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೯೫—೯೬ನೇ ಇಸವಿ ಅರ್ಜೀ ನಂಬರ್ 453.

ಮೃತಪಟ್ಟ ತರೀಕೆರೆ ಗರುಡಾಚಾರ್ರ ಆಸ್ತೀ ವಿಷಯದಲ್ಲಿ—

ಅರ್ಜೀದಾರು 1ನೇ ತಿಮ್ಮಕ್ಕ, 2ನೇ ಗರುಡಮ್ಮ ಸಹ, ಮೃತಪಟ್ಟ ಸದರೀ ಗರುಡಾಚಾರ್ರಿಗೆ 1ನೇ ಹೆಂಡತಿ, 2ನೇ ಮಗಳು ಆಗಬೇಕೆಂಬ ಹಕ್ಕುದಾರಿ ಮೇಲೆ ನಾಗಮಂಗಲದ ತಾಲ್ಲೂಕು ಬಿಂಡಿಗನವಿಲೇ ಸ್ಥಳದ ಸದರೀ 1—2ನೇ ಅರ್ಜೀದಾರು ಸದರೀ ವಾಸಸ್ಥ